## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.

ಸೂಚನೆ:- 2019-20ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಆರ್ಥಿಕ ನೆರವಿನೊಂದಿಗೆ ಭತ್ತ ಖರೀದಿಗೆ ಅನುಮತಿ ನೀಡಲಾಗಿರುತ್ತದೆ. ಆದರೆ ಸಣ್ಣ ಹಿಡುವಳಿದಾರರಿಂದ (ಎರಡೂವರೆ ಎಕರೆ ಜಮೀನು ಹೊಂದಿರುವ ರೈತರು) ಎಕರೆ ಒಂದಕ್ಕೆ 16 ಕ್ವಿಂಟಾಲ್‌ನಂತೆ ಖರೀದಿ ಮಾಡುವಂತೆ ಅನುಮತಿ ನೀಡಿರುವುದರಿಂದ ಭತ್ತಬೆಳೆದ ರೈತರಿಗೆ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಆಹಾರ, ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯಬಯಸುತ್ತೇನೆ.

*****

ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಆಹಾರ ಇಲಾಖೆಯಿಂದ ರೈತರಿಂದ ಭತ್ತ, ರಾಗಿ, ಬಿಳಿಜೋಳ ಮತ್ತು ಆಹಾರಧಾನ್ಯಗಳನ್ನು ಖರೀದಿ ಮಾಡಿ ಕೇಂದ್ರ ಸರ್ಕಾರದ ಲೆಕ್ಕಕ್ಕೆ ಜಮಾ ಮಾಡಲಾಗುತ್ತಿದೆ. ಪ್ರತಿ ವರ್ಷದಂತೆ 2019-20 ನೇ ಸಾಲಿನಲ್ಲಿ ಕೂಡಾ ರಾಜ್ಯದ ಪ್ರಮುಖ ಆಹಾರ ಬೆಳೆಗಳಾದ ಭತ್ತ, ರಾಗಿ ಮತ್ತು ಬಿಳಿಜೋಳ ಖರೀದಿಸಲು ರಾಜ್ಯದಲ್ಲಿ ಬೆಂಬಲ ಬೆಲೆ ಯೋಜನೆಯನ್ನು ಜಾರಿಗೊಳಿಸಲಾಗಿದೆ.

ಕೇಂದ್ರ ಸರ್ಕಾರದ ದಿನಾಂಕ: 25.07.2019 ರಂದು ಆದೇಶ ಸಂಖ್ಯೆ: 3(3)/2019-ಪಿವೈ1 ರಲ್ಲಿ 2019-20ನೇ ಸಾಲಿನ ಮುಂಗಾರು ಋತುವಿನಲ್ಲಿ ಬೆಳೆಯುವ ಸಾಮಾನ್ಯ ಭತ್ತಕ್ಕೆ ಪ್ರತಿ ಕ್ವಿಂಟಾಲ್ ಗೆ ರೂ.1815/- ಮತ್ತು ಗ್ರೇಡ್-ಎ ಭತ್ತಕ್ಕೆ ಪ್ರತಿ ಕ್ವಿಂಟಾಲ್ ಗೆ ರೂ.1835/- ಬೆಂಬಲ ಬೆಲೆಯನ್ನು ಘೋಷಿಸಲಾಗಿರುತ್ತದೆ.

ರಾಜ್ಯದಲ್ಲಿ ಅಂದಾಜು 1.75 ಲಕ್ಷ ಮೆ.ಟನ್ ಭತ್ತ, 2.00 ಲಕ್ಷ ಮೆ.ಟನ್ ರಾಗಿ ಮತ್ತು ಮತ್ತು 1241 ಮೆ.ಟನ್ ಬಿಳಿಜೋಳವನ್ನು ಬೆಂಬಲ ಬೆಲೆ ಯೋಜನೆಯಡಿ 2019-20ನೇ ಸಾಲಿನಲ್ಲಿ ಖರೀದಿಸುವುದಾಗಿ ಸರ್ಕಾರದ ದಿನಾಂಕ: 19.06.2019 ರ ಪತ್ರ ಸಂಖ್ಯೆ: ಆನಾಸ 43 ಆರ್ ಪಿಆರ್ 2019 ರಲ್ಲಿ ಸಲ್ಲಿಸಲಾಗಿದ್ದ ಪ್ರಸ್ತಾವನೆಗೆ ಕೇಂದ್ರ ಸರ್ಕಾರವು ಅನುಮೋದನೆ ನೀಡಿದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ

1. ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತ
2. ಕರ್ನಾಟಕ ರಾಜ್ಯ ಉಗ್ರಾಣ ನಿಗಮ
3. ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ

ಮೇಲಿನ ಮೂರು ಸಂಗ್ರಹಣಾ ಏಜೆನ್ಸಿಗಳನ್ನು ಗುರುತಿಸಿ ಜಿಲ್ಲೆಗಳನ್ನು ನಿಯೋಜಿಸಲಾಗಿದೆ.

ರಾಜ್ಯದಲ್ಲಿರುವ ಸಣ್ಣ ಹಾಗೂ ಅತೀ ಸಣ್ಣ ಹಿಡುವಳಿದಾರರಿಗೂ ಅವಕಾಶ ಲಭ್ಯವಾಗುವ ರೀತಿಯಲ್ಲಿ ಪ್ರತಿ ರೈತರಿಂದ ಭತ್ತವನ್ನು ಪ್ರತಿ ಎಕರೆಗೆ 16 ಕ್ವಿಂಟಾಲ್ ನಂತೆ ಗರಿಷ್ಟ 40 ಕ್ವಿಂಟಾಲ್ ಮಿತಿಯನ್ನು ನಿಗದಿಪಡಿಸಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿ ಕಾರ್ಯವನ್ನು ಸಂಪೂರ್ಣವಾಗಿ ಗಣಕೀಕರಣಗೊಳಿಸಲಾಗಿದ್ದು, ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ "ಫ್ರೂಟ್ಸ್" Farmer

Registration and Unified Benificiary Information System (FRUITS) ದತ್ತಾಂಶದಿಂದ ರೈತರ ಮಾಹಿತಿಯನ್ನು ನೇರವಾಗಿ ಪಡೆಯಲಾಗುವುದು ಜಿಲ್ಲೆಗಳಲ್ಲಿ ಸಂಪೂರ್ಣ ಖರೀದಿ ಕಾರ್ಯವನ್ನು ಜಾರಿಗೊಳಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬೆಂಬಲ ಬೆಲೆ ಜಿಲ್ಲಾ ಕ್ರಿಯಾ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಖರೀದಿಗಾಗಿ ಜಿಲ್ಲೆಗೆ ನಿಯೋಜಿಸಲ್ಪಟ್ಟ ಖರೀದಿ ಏಜೆನ್ಸಿಯವರೊಂದಿಗೆ ಜಿಲ್ಲೆಗೆ ಅಗತ್ಯವಿರುವ ಖರೀದಿ ಕೇಂದ್ರಗಳನ್ನು ತೆರೆದು, ರೈತರಿಗೆ ಸಾಕಷ್ಟು ಪ್ರಚಾರ ನೀಡಿ ಖರೀದಿ ಕಾರ್ಯವನ್ನು ನಿರ್ವಹಿಸುತ್ತಿದೆ.

2019-20ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಖರೀದಿಗಾಗಿ ರೈತರ ನೋಂದಣಿ ಮತ್ತು ಖರೀದಿ ಅವಧಿಯನ್ನು ಈ ಕೆಳಗಿನಂತೆ ನಿಗದಿಪಡಿಸಿದೆ.

| ಕ್ರ.ಸಂ | ಆಹಾರ ಧಾನ್ಯ | ರೈತರ ನೋಂದಣಿ ಅವಧಿ | ಖರೀದಿ ಅವಧಿಯ ಮುಕ್ತಾಯ |
|---|---|---|---|
| 1 | ಭತ್ತ | 29.02.2020ರ ವರೆಗೆ | 31-03-2020 |
| 2 | ರಾಗಿ | 29.02.2020ರ ವರೆಗೆ | 31.03.2020 |
| 3 | ಬಿಳಿ ಜೋಳ | 29.02.2020ರ ವರೆಗೆ | 31.03.2020 |

ಪ್ರಸಕ್ತ ಸಾಲಿನಲ್ಲಿ ದಿನಾಂಕ:18.02.2020ರ ವರೆಗೆ 18,502 ರೈತರು 41,814.98 ಮೆಟ್ರಿಕ್ ಟನ್ ಭತ್ತ ಖರೀದಿಗಾಗಿ ನೋಂದಾಯಿಸಿಕೊಂಡಿದ್ದು, ನೋಂದಾವಣೆಗೆ ದಿನಾಂಕ: 29.02.2020 ವರೆಗೂ ಅವಕಾಶವಿರುತ್ತದೆ.

ರಾಜ್ಯದ ಸಣ್ಣ ಮತ್ತು ಅತಿಸಣ್ಣ ರೈತರಿಂದ ಬೆಂಬಲ ಬೆಲೆ ಖರೀದಿಗಾಗಿ ಕೇಂದ್ರ ಸರ್ಕಾರವು ಮಿತಿಗೊಳಿಸಿರುವ ಪ್ರಮಾಣದಲ್ಲಿ; ರಾಜ್ಯದ ಸಣ್ಣ ಮತ್ತು ಅತಿಸಣ್ಣ ರೈತರಿಂದ ಆದ್ಯತೆ ಮೇರೆಗೆ ಭತ್ತವನ್ನು ಖರೀದಿಸಲಾಗುತ್ತಿದೆ.

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಆನಾಸ 19 ಆರ್‌ಪಿಆರ್ 2020 (ಇ-ಆಫೀಸ್)